**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.10.2026 19.35 hrs**

**<><><><>**

ಮುಖ್ಯಾಂಶಗಳು

1. ಅನಿಶ್ಚಿತ ಜಾಗತಿಕ ಪರಿಸ್ಥಿತಿಯನ್ನು ಸರಿದೂಗಿಸಲು ಶಾಂಘೈ ಸದಸ್ಯ ರಾಷ್ಟ್ರಗಳ ಒಮ್ಮತದ ಸಹಕಾರಕ್ಕೆ ಸಚಿವ ರಾಜನಾಥ್ ಸಿಂಗ್ ಕರೆ
2. ಪಂಜಾಬ್ ಅನ್ನು ೨೦೨೯ರ ಅಂತ್ಯದವೇಳೆಗೆ ಮಾದಕವಸ್ತು ಮುಕ್ತಗೊಳಿಸುವ ಗುರಿ - ಕೇಂದ್ರ ಗೃಹ ಸಚಿವ ಅಮಿತ್ ಶಾ
3. ನಾಡಿನಾದ್ಯಂತ ಸಂಭ್ರಮದ ಆಯುಧ ಪೂಜೆ, ದೆಹಲಿಯಲ್ಲಿ ವಿಜಯದಶಮಿ ಆಚರಣೆಯಲ್ಲಿ ಪ್ರಧಾನಮಂತ್ರಿ ಭಾಗಿ
4. ಜಪಾನ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಪ್ಯಾರಾ ಗೇಮ್ಸ್ : ಭಾರತದ ಅಮೋಘ ಪ್ರದರ್ಶನ, ಈವರೆಗೆ ೩೪ ಪದಕ

<><><><>

ಭೌಗೋಳೀಕ ರಾಜಕೀಯ ಉದ್ವಿಗ್ನತೆ, ವ್ಯಾಪಾರ ಮತ್ತು ಪೂರೈಕೆ ಸರಪಳಿಗಳಲ್ಲಿ ಅಡೆತಡೆ ಸೇರಿದಂತೆ ಜಾಗತಿಕ ಅನಿಶ್ಚಿತತೆಯನ್ನು ಸರಿಪಡಿಸಲು ಶಾಂಘೈ ಸಹಕಾರ ಸಂಘಟನೆ-ಎಸ್‌ಸಿಒ ಸದಸ್ಯ ರಾಷ್ಟ್ರಗಳು ಒಗ್ಗೂಡಿ ಕಾರ್ಯ ಪ್ರವೃತ್ತವಾಗುವಂತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ ನೀಡಿದ್ದಾರೆ. ತಜಿಕಿಸ್ತಾನದ ದುಶಾಂಬೆ ನಗರದಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆಯ-ಎಸ್‌ಸಿಒ ಸರ್ಕಾರದ ಮುಖ್ಯಸ್ಥರ ಮಂಡಳಿಯ ೨೫ನೇ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಭಯೋತ್ಪಾದನೆಯ ಸಂಪೂರ್ಣ ವ್ಯವಸ್ಥೆಯನ್ನು ಕಿತ್ತೊಗೆಯಲು ಎಲ್ಲ ರಾಷ್ಟ್ರಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಭಯೋತ್ಪಾದನೆಗೆ ಯಾವುದೇ ಸಮರ್ಥನೆ ನೀಡಲು ಸಾಧ್ಯವಿಲ್ಲ. ಅದನ್ನು ಎದುರಿಸುವ ವಿಚಾರದಲ್ಲಿ ದ್ವಂದ್ವ ನೀತಿಗೆ ಅವಕಾಶವಿಲ್ಲ. ಭಯೋತ್ಪಾದಕರಿಗೆ ಹಣಕಾಸು ನೆರವು ನೀಡುವವರು, ಬೆಂಬಲಿಸುವವರು ಹಾಗೂ ಆಶ್ರಯ ನೀಡುವವರಿಗೆ ಯಾವುದೇ ಸ್ಥಾನವಿರಬಾರದು ಎಂದು ಪ್ರತಿಪಾದಿಸಿದರು. ಎಸ್‌ಸಿಒ ಸದಸ್ಯ ರಾಷ್ಟ್ರಗಳ ನಡುವಿನ ಆರ್ಥಿಕ ಸಹಕಾರವು ಎಲ್ಲರನ್ನೂ ಒಳಗೊಳ್ಳುವಂತಿರಬೇಕು ಹಾಗೂ ಪರಸ್ಪರ ಪ್ರಯೋಜನಕಾರಿಯಾಗಿರಬೇಕು ಎಂಬುದು ಭಾರತದ ನಿಲುವಾಗಿದೆ ಎಂದು ಅವರು ಹೇಳಿದರು. ಸಾರ್ವಭೌಮ ಸಮಾನತೆ, ಒಮ್ಮತ ಮತ್ತು ಪರಸ್ಪರ ಗೌರವದ ತತ್ವಗಳಿಗೆ ಬದ್ಧವಾಗಿರುವುದರ ಜೊತೆಗೆ ಎಸ್‌ಸಿಒ ಸಮರ್ಥವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು

ಒತ್ತಿಹೇಳಿದರು. ೨೦೨೬ರಿಂದ ೨೦೩೦ರ ಅವಧಿಯ ಬಹುಪಕ್ಷೀಯ ವ್ಯಾಪಾರ ಮತ್ತು ಆರ್ಥಿಕ ಸಹಕಾರ ಕಾರ್ಯಕ್ರಮದ ಕಾರ್ಯಯೋಜನೆಗೆ ಭಾರತ ಬೆಂಬಲ ನೀಡಲಿದೆ ಎಂದು ಸಚಿವರು ಪುನರುಚ್ಚರಿಸಿದರು. ಮಾರುಕಟ್ಟೆಗಳನ್ನು ಸಂಪರ್ಕಿಸುವ, ವ್ಯಾಪಾರಕ್ಕೆ ಅನುಕೂಲ ಕಲ್ಪಿಸುವ ಹಾಗೂ ಅಭಿವೃದ್ಧಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುವ ಉಪಕ್ರಮಗಳನ್ನು ಭಾರತ ಬೆಂಬಲಿಸುತ್ತದೆ ಎಂದು ಅವರು ತಿಳಿಸಿದರು. ಅಂತರರಾಷ್ಟ್ರೀಯ ಉತ್ತರ-ದಕ್ಷಿಣ ಸಾರಿಗೆ ಕಾರಿಡಾರ್ ಮತ್ತು ಚಾಬಹಾರ್ ಬಂದರಿನಂತಹ ಯೋಜನೆಗಳು ಮಧ್ಯ ಏಷ್ಯಾವನ್ನು ವಿಶಾಲ ಮಾರುಕಟ್ಟೆಗಳೊಂದಿಗೆ ಸಂಪರ್ಕಿಸುವಲ್ಲಿ ಮಹತ್ವದ ಕೊಡುಗೆ ನೀಡಬಲ್ಲವು ಎಂದು ರಾಜನಾಥ್ ಸಿಂಗ್ ಹೇಳಿದರು.

<><><><>

ಪಂಜಾಬ್‌ಅನ್ನು ೨೦೨೯ರ ಡಿಸೆಂಬರ್ ವೇಳೆಗೆ ಮಾದಕವಸ್ತು ಮುಕ್ತಗೊಳಿಸುವುದಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಪಂಜಾಬ್‌ನಲ್ಲಿ ಇತ್ತೀಚೆಗೆ ಮಾದಕದ್ರವ್ಯ ಹಾವಳಿ ಪ್ರಶ್ನಿಸಿದ್ದಕ್ಕೆ ಪ್ರಾಣ ತೆತ್ತವರ ಕುಟುಂಬ ಸದಸ್ಯರನ್ನು ಭೇಟಿ ಮಾಡಿ ಸಚಿವರು ಸಾಂತ್ವನ ಹೇಳಿದರು. ಮಾದಕ ವ್ಯಸನಿಯಾಗಿದ್ದರಿಂದ ಆತ್ಮಹತ್ಯೆ ಮಾಡಿಕೊಂಡಿದ್ದರೆನ್ನಲಾದ ಗುಲ್ಜಾರ್ ಸಿಂಗ್ ಅವರ ಕುಟುಂಬವನ್ನೂ ಅವರು ಭೇಟಿ ಮಾಡಿದರು. ನಂತರ ಲುಧಿಯಾನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವರು, ಸಂತ್ರಸ್ತ ಕುಟುಂಬಗಳ ಸ್ಥಿತಿ ತಮ್ಮ ಮನ ಕಲಕಿದ್ದು, ಎರಡು ಪ್ರಕರಣಗಳ ತನಿಖೆಯನ್ನು ಸಿಬಿಐಗೆ ವಹಿಸಬೇಕಾಗಬಹುದು ಎಂದರು. ಮುಖ್ಯಮಂತ್ರಿ ಭಗವಂತ್ ಮಾನ್ ಇಂದು ಬೆಳಗ್ಗೆ ಸಿಬಿಐ ತನಿಖೆಗೆ ವಹಿಸಿರುವ ಪರ್ವಿಂದರ್ ಸಿಂಗ್ ಝೋಟಾ ಪ್ರಕರಣದ ಬಗ್ಗೆ ಸಂಪೂರ್ಣ ತನಿಖೆ ನಡೆಸಲಾಗುವುದು. ಪಂಜಾಬ್ ಅನ್ನು ಮಾದಕ ವಸ್ತುಗಳ ಹಾವಳಿಯಿಂದ ಮುಕ್ತಗೊಳಿಸುವ ಸಂಕಲ್ಪ ಮಾಡಲಾಗಿದ್ದು, ಈ ಕೃತ್ಯದಲ್ಲಿ ಭಾಗಿಯಾಗಿರುವವರ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಅಮಿತ್ ಶಾ ಭರವಸೆ ನೀಡಿದ್ದಾರೆ. ನಂತರ ಲುಧಿಯಾನದಲ್ಲಿ ನಡೆದ ದಸರಾ ಕಾರ್ಯಕ್ರಮದಲ್ಲಿ ಅಮಿತ್ ಶಾ ಪಾಲ್ಗೊಂಡರು. ರಾವಣನ ಪ್ರತಿಕೃತಿಯನ್ನು ದಹಿಸುವ ಕಾರ್ಯಕ್ರಮಕ್ಕೆ 'ಚಿಟ್ಟಾ ರಾವಣ' ಎಂಬ ರೂಪಕ ನೀಡಲಾಗಿತ್ತು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 'ಮಾದಕ ವಸ್ತುಗಳ ರಾವಣ'ನನ್ನೂ ದಹಿಸಲಾಗುವುದು ಎಂದರು.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಇಂದು ಮುಂಬೈನಲ್ಲಿ ಯುಎಇ ಉಪಪ್ರಧಾನಿ ಶೇಖ್ ಅಬ್ದುಲ್ಲಾ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ಜೈಶಂಕರ್, ಜಾಗತಿಕ ಸವಾಲುಗಳು ಮತ್ತು ಪ್ರಾದೇಶಿಕ

ಸಮಸ್ಯೆಗಳ ನಡುವೆಯೂ ಈ ವರ್ಷ ಭಾರತ ಮತ್ತು ಯುಎಇ ನಡುವಿನ ಆರ್ಥಿಕ ಪಾಲುದಾರಿಕೆ ಹೊಸ ಮೈಲಿಗಲ್ಲುಗಳನ್ನು ಸಾಧಿಸಿದೆ ಎಂದು ಹೇಳಿದರು. ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಹಾಕಿದ ಬಳಿಕ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ೧೦೦ ಶತಕೋಟಿ ಅಮೆರಿಕನ್ ಡಾಲರ್‌ಗಳ ಗಡಿ ದಾಟಿದೆ ಎಂದು ಅವರು ತಿಳಿಸಿದರು. ರಕ್ಷಣೆ, ಇಂಧನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿನ ಕಾರ್ಯತಂತ್ರದ ಸಹಕಾರವು ಉಭಯ ದೇಶಗಳ ಜನರ ಜೀವನವನ್ನು ಮತ್ತಷ್ಟು ಸಮೃದ್ಧಗೊಳಿಸುತ್ತಿದೆ ಎಂದು ಡಾ. ಜೈಶಂಕರ್ ಹೇಳಿದರು.

<><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಇಂದು ಮಧ್ಯಾಹ್ನ ಮುಂಬೈನಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರೊಂದಿಗೆ ಮಾತುಕತೆ ನಡೆಸಿದರು. ವ್ಯಾಪಾರ, ಇಂಧನ, ತಂತ್ರಜ್ಞಾನ, ರಕ್ಷಣೆ ಸೇರಿದಂತೆ ವಿವಿಧ ವಲಯಗಳಲ್ಲಿ ಉಭಯ ದೇಶಗಳ ಸಹಕಾರವನ್ನು ಇನ್ನಷ್ಟು ಮುಂದಕ್ಕೆ ಕೊಂಡೊಯ್ಯುವ ಬಗ್ಗೆ ಚರ್ಚಿಸಿದರು. ಇದು ಭಾರತಕ್ಕೆ ಮಾರ್ಕೊ ರೂಬಿಯೊ ಅವರ ಎರಡನೇ ಭೇಟಿಯಾಗಿದೆ. ಇಂದು ಮುಂಬೈಗೆ ಆಗಮಿಸಿದ ಮಾರ್ಕೊ ರೂಬಿಯೊ ಅವರನ್ನು ಮಹಾರಾಷ್ಟ್ರದ ಸಂಸ್ಕೃತಿ ಖಾತೆ ಸಚಿವ ಆಶಿಷ್ ಶೆಲಾರ್ ಅವರನ್ನು ಬರಮಾಡಿಕೊಂಡರು. ಬಳಿಕ ಅವರು, ಮುಂಬೈ ದಾಳಿಯ ಸಂತ್ರಸ್ತರಿಗೆ ಗೌರವ ನಮನ ಸಲ್ಲಿಸಿದರು.

<><><>

ನಾಡಿನಾದ್ಯಂತ ಆಯುಧ ಪೂಜೆಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ವಾಹನಗಳು, ಕಾರ್ಖಾನೆಗಳು ಹಾಗೂ ಕಚೇರಿಗಳಲ್ಲಿ ಸ್ವಚ್ಛತಾ ಕಾರ್ಯ ಕೈಗೊಂಡು, ಯಂತ್ರೋಪಕರಣಗಳು, ವಾಹನಗಳು ಮತ್ತು ಉಪಕರಣಗಳಿಗೆ ಪೂಜೆ ಸಲ್ಲಿಸಲಾಯಿತು. ಬಾಳೆಕಂದು ಕಟ್ಟಿ ಮತ್ತು ಮಾವಿನ ಎಲೆಗಳ ತೋರಣ ಕಟ್ಟಿ, ಸಾಂಪ್ರದಾಯಿಕ ಹೂವಿನ ಅಲಂಕಾರಗಳಿಂದ ವಾಹನಗಳು ಮತ್ತು ಯಂತ್ರೋಪಕರಣಗಳನ್ನು ಸಿಂಗರಿಸಿ, ಸಿಹಿ ಹಂಚಿ ಸಂಭ್ರಮಿಸುವ ದೃಶ್ಯ ಸಾಮಾನ್ಯವಾಗಿತ್ತು. ದುಷ್ಟಶಕ್ತಿಗಳನ್ನು ದೂರವಿಡುವ ನಂಬಿಕೆಯೊಂದಿಗೆ ವಾಹನ, ಮನೆ ಮತ್ತು ಕಟ್ಟಡಗಳ ಮುಂದೆ ಬೂದು ಕುಂಬಳಕಾಯಿ ಒಡೆಯಲಾಯಿತು. ಮನೆಗಳಲ್ಲಿಯೂ ದೈನಂದಿನ ಜೀವನದಲ್ಲಿ ಬಳಸುವ ಪುಸ್ತಕಗಳು ಹಾಗೂ ಉಪಕರಣಗಳಿಗೆ ಪೂಜೆ ನೆರವೇರಿಸಿದರು. ಮೈಸೂರು ಅರಮನೆಯಲ್ಲಿ ರಾಜಮನೆತನದ ಪುರೋಹಿತರಿಂದ ಶಸ್ತ್ರಾಗಾರ, ಪಲ್ಲಕ್ಕಿಗಳು ಹಾಗೂ ರಾಜಮನೆತನದ ಇತರ ರಾಜಲಾಂಛನಗಳಿಗೆ ಆಯುಧ ಪೂಜೆ ನೆರವೇರಿಸಲಾಯಿತು. ಮಹಾನವಮಿ ಅಂಗವಾಗಿ ಮೈಸೂರು ಅರಮನೆಯಲ್ಲಿ ರಾಜಮನೆತನದವರು ಬಳಸುತ್ತಿರುವ ವಾಹನಗಳು, ಅರಮನೆಯ ಕತ್ತಿ, ಈಟಿ, ಗುರಾಣಿ

ಸೇರಿದಂತೆ ಆಯುಧಗಳಿಗೆ ಹಾಗೂ ನಾಳೆ ಕುಶಾಲತೋಪು ಸಿಡಿಸಲು ಬಳಸುವ ಪಿರಂಗಿ ಗಾಡಿಗಳಿಗೂ ಪೂಜೆ ಸಲ್ಲಿಸಲಾಯಿತು. ಪಟ್ಟದ ಆನೆ, ಕುದುರೆ, ಹಸುಗಳಿಗೂ ಪೂಜೆ ನೆರವೇರಿತು. ಕರ್ನಾಟಕದಲ್ಲಿ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವವು ನಾಳೆ ವಿಜಯದಶಮಿ ಆಚರಣೆಯೊಂದಿಗೆ ಮುಕ್ತಾಯಗೊಳ್ಳಲಿದೆ. ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿ ನಾಳೆ ನಡೆಯಲಿದ್ದು, ಇದಕ್ಕಾಗಿ ಜಿಲ್ಲಾಡಳಿತ ಅಂತಿಮ ಹಂತದ ಸಿದ್ಧತೆಗಳನ್ನು ಕೈಗೊಂಡಿದೆ. ನಾಳೆ ಮಧ್ಯಾಹ್ನ ೧.೩೮ ರಿಂದ ೧.೫೮ ರವರೆಗೆ ಅರಮನೆ ಬಲರಾಮ ದ್ವಾರದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಂಪ್ರದಾಯಿಕ ನಂದಿ ಧ್ವಜ ಪೂಜೆ ನೆರವೇರಿಸಿ, ಜಂಬೂ ಸವಾರಿಗೆ ಚಾಲನೆ ನೀಡಲಿದ್ದಾರೆ. ಸಂಜೆ ೪.೧೦ ರಿಂದ ೪.೩೫ರವರೆಗೆ ಅಂಬಾವಿಲಾಸ ಅರಮನೆಯ ಆವರಣದಲ್ಲಿ ಗಜಪಡೆಯ ನಾಯಕ ಪ್ರಶಾಂತ ಹೊರಲಿರುವ ೭೫೦ ಕೆಜಿ ತೂಕದ ಚಿನ್ನದ ಅಂಬಾರಿಯಲ್ಲಿ ವಿರಾಜಮಾನ ಚಾಮುಂಡೇಶ್ವರಿ ಮೂರ್ತಿಗೆ ಮುಖ್ಯಮಂತ್ರಿ ಪುಷ್ಪಾರ್ಚನೆ ಮಾಡಲಿದ್ದಾರೆ. ಇದರೊಂದಿಗೆ ಮೆರವಣಿಗೆಗೆ ವಿಧ್ಯುಕ್ತ ಚಾಲನೆ ದೊರೆಯಲಿದೆ. ನವದೆಹಲಿಯಲ್ಲಿ ಇಂದೇ ವಿಜಯದಶಮಿ ಆಚರಿಸಲಾಗುತ್ತಿದ್ದು, ಸಂಜೆ ರಾವಣನ ಪ್ರತಿಕೃತಿ ದಹನ ಕಾರ್ಯಕ್ರಮ ನಡೆದಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವಿಜಯದಶಮಿಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಶ್ರೀರಾಮನ ಆದರ್ಶಗಳನ್ನು ಪಾಲಿಸುವಂತೆ ಕರೆ ನೀಡಿದರು. ಸ್ವಾವಲಂಬಿ ಭಾರತಕ್ಕಾಗಿ ಜನಕಲ್ಯಾಣಕ್ಕಾಗಿ ಶ್ರೀರಾಮ ಪ್ರೇರಣೆ ಎಂದು ನುಡಿದರು.

<><><><>

ಜಪಾನ್‌ನ ಐಚಿ-ನಗೋಯಾದಲ್ಲಿ ನಡೆಯುತ್ತಿರುವ ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಭಾರತದ ಅಮೋಘ ಪ್ರದರ್ಶನ ಮುಂದುವರಿದಿದ್ದು, ಈವರೆಗೆ ೯ ಚಿನ್ನ, ೧೧ ಬೆಳ್ಳಿ ಹಾಗೂ ೧೪ ಕಂಚು ಸೇರಿದಂತೆ ಒಟ್ಟು ೩೪ ಪದಕಗಳನ್ನು ಜಯಿಸಿದೆ. ಪುರುಷರ ಡಿಸ್ಕಸ್ ಥ್ರೋ ವಿಭಾಗದಲ್ಲಿ ಭಾರತ ಮೂರು ಪದಕಗಳನ್ನು ಗೆದ್ದಿದೆ. ದೇವೇಂದ್ರ ಕುಮಾರ್ ಚಿನ್ನದ ಪದಕ, ರಾಕೇಶ್ ಬೆಳ್ಳಿ ಹಾಗೂ ಪ್ರದೀಪ್ ಕುಮಾರ್ ವೈಯಕ್ತಿಕ ಶ್ರೇಷ್ಠ ಸಾಧನೆ ದಾಖಲಿಸಿ ಕಂಚಿನ ಪದಕ ಗೆದ್ದಿದ್ದಾರೆ. ಪುರುಷರ ಹೈಜಂಪ್ ಟಿ೪೭ ವಿಭಾಗದಲ್ಲಿ ನಿಶಾದ್ ಕುಮಾರ್ ಚಿನ್ನದ ಪದಕ ತಮ್ಮದಾಗಿಸಿಕೊಂಡರು. ಏಷ್ಯನ್ ಪ್ಯಾರಾ ಕ್ರೀಡಾಕೂಟದ ಒಂದೇ ಆವೃತ್ತಿಯಲ್ಲಿ ಎರಡು ಚಿನ್ನದ ಪದಕ ಗೆದ್ದ ಮೂರನೇ ಭಾರತೀಯ ಎಂಬ ಹೆಗ್ಗಳಿಕೆಗೆ ಅವರು ಪಾತ್ರರಾಗಿದ್ದಾರೆ. ನಿನ್ನೆ ಪುರುಷರ ಲಾಂಗ್ ಜಂಪ್ ಟಿ೪೭ ವಿಭಾಗದಲ್ಲಿ ೭.೧೧ ಮೀಟರ್ ದೂರ ಜಿಗಿದು ಚಿನ್ನ ಗೆದ್ದಿದ್ದರು. ಪುರುಷರ ಡಿಸ್ಕಸ್ ಥ್ರೋ ವಿಭಾಗದಲ್ಲಿ ಭಾರತದ ಪ್ರಣವ್ ಸೂರಮಾ ಚಿನ್ನದ ಪದಕ ಗೆದ್ದು ಹೊಸ ದಾಖಲೆ ನಿರ್ಮಿಸಿದ್ದಾರೆ. ಇದೇ ವಿಭಾಗದಲ್ಲಿ ರಾಮ್ ರತನ್ ಸಿಂಗ್ ರಜತ ಪದಕ ಜಯಿಸಿದ್ದಾರೆ. ಮಹಿಳೆಯರ ೨೦೦

ಮೀಟರ್ ಟಿ೧೨ ವಿಭಾಗದ ಫೈನಲ್‌ನಲ್ಲಿ ಸಿಮ್ರನ್ ಚಿನ್ನದ ಪದಕ ಗೆಲ್ಲುವುದರ ಜೊತೆಗೆ ಹೊಸ ಕ್ರೀಡಾಕೂಟದ ದಾಖಲೆ ನಿರ್ಮಿಸಿದರು. ಇದೇ ಸ್ಪರ್ಧೆಯಲ್ಲಿ ತೇಜಲ್ಬೆನ್ ದಾಮೋರ್ ಕಂಚಿನ ಪದಕ ಪಡೆದಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>